# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 211 (286) |
| ಮಾನ್ಯ ಸದಸ್ಯರ ಹೆಸರು | ಶ್ರೀ ಮುನಿರಾಜು ಗೌಡ ಪಿ.ಎಂ. (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 17/02/2022 |
| ಉತ್ತರಿಸುವವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕಾರ್ಮಿಕ ಇಲಾಖೆಯಲ್ಲಿ ನೋಂದಣಿಯಾಗಿರುವ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಸಂಖ್ಯೆ ಎಷ್ಟು; | ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ಇಲ್ಲಿಯವರೆಗೆ 28.94ಲಕ್ಷ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ಮಂಡಳಿಯ ಫಲಾನುಭವಿಗಳಾಗಿ ನೋಂದಣಿಯಾಗಿರುತ್ತಾರೆ. |
| ಆ) | ಕಳೆದ ಮೂರು ವರ್ಷಗಳಲ್ಲಿ ಸ್ಥಳೀಯ ಸಂಸ್ಥೆಗಳು ಹಾಗೂ ನಗರಾಭಿವೃದ್ಧಿ ಪ್ರಾಧಿಕಾರಗಳಿಂದ ಕಟ್ಟಡಗಳ ನಿರ್ಮಾಣ ನಕ್ಷೆ ಮಂಜೂರಾತಿ ಸಂದರ್ಭದಲ್ಲಿ ಅರ್ಜಿದಾರರಿಂದ "ಕಟ್ಟಡ ಮತ್ತು ನಿರ್ಮಾಣ ಕಾರ್ಮಿಕರ ಹಿತರಕ್ಷಣಾ ನಿಧಿ" ಲೆಕ್ಕ ಶೀರ್ಷಿಕೆ ಅಡಿಯಲ್ಲಿ ಸಂಗ್ರಹಿಸಲಾಗಿರುವ ಹಣದ ಮೊತ್ತ ಎಷ್ಟು; | ಕಳೆದ ಮೂರು ವರ್ಷಗಳಲ್ಲಿ ಸ್ಥಳೀಯ ಸಂಸ್ಥೆಗಳಲ್ಲಿ ಹಾಗೂ ನಗರಾಭಿವೃದ್ಧಿ ಪ್ರಾಧಿಕಾರಗಳಿಂದ ಕಟ್ಟಡಗಳ ನಿರ್ಮಾಣ ನಕ್ಷೆ ಮಂಜೂರಾತಿ ಸಂದರ್ಭದಲ್ಲಿ ಶೇ.1ರಂತೆ ರೂ.205,83,08,770/-ಗಳಷ್ಟು ಸೆಸ್ ಸಂಗ್ರಹವಾಗಿರುತ್ತದೆ. |
| ಇ) | "ಕಟ್ಟಡ ಮತ್ತು ನಿರ್ಮಾಣ ಕಾರ್ಮಿಕರ ಹಿತರಕ್ಷಣಾ ನಿಧಿ" ಶೀರ್ಷಿಕೆಯಲ್ಲಿ ಸಂಗ್ರಹವಾಗಿರುವ ಹಣದಿಂದ ಕಟ್ಟಡ ಕಾರ್ಮಿಕರಿಗೆ ಯಾವ ಯಾವ ರೀತಿಯಲ್ಲಿ ಸಹಾಯ ಮಾಡಲು ಅವಕಾಶವಿರುತ್ತದೆ; | ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಸುಂಕ ನಿಧಿಯಲ್ಲಿ ಸಂಗ್ರಹವಾಗಿರುವ ಸೆಸ್ ಮೊತ್ತದಿಂದ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ (ಉದ್ಯೋಗದ ಕ್ರಮೀಕರಣ ಮತ್ತು ಸೇವಾ ಷರತ್ತುಗಳು) ಕಾಯ್ದೆ, 1996ರ ಕಲಂ 22ರಲ್ಲಿ ನಿರೂಪಿಸಿರುವ ಉದ್ದೇಶಗಳಿಗಾಗಿ ವಿವಿಧ ಯೋಜನೆಗಳನ್ನು ರೂಪಿಸಲು ಅವಕಾಶವಿರುತ್ತದೆ. ಸದರಿ ಕಾಯ್ದೆಯನ್ವಯ ಕರ್ನಾಟಕ ನಿಯಮ, 2006ನ್ನು ರಚಿಸಿ, ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ 19 ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಯೋಜನೆಗಳನ್ನು ಅನುಷ್ಠಾನ ಮಾಡಲಾಗುತ್ತಿದು, ಯೋಜನೆಗಳ ವಿವರವನ್ನು ಅನುಬಂಧದಲ್ಲಿ ನೀಡಲಾಗಿದೆ. |
| ಈ) | ಕಳೆದ ಮೂರು ವರ್ಷಗಳಲ್ಲಿ ರಾಜ್ಯಾದ್ಯಂತ ಎಷ್ಟು ಜನ ಕಟ್ಟಡ ಮತ್ತು ಕಾರ್ಮಿಕರ ಹಿತರಕ್ಷಣಾ ನಿಧಿಯಿಂದ ಯಾವ ಯಾವ ಉದ್ದೇಶಗಳಿಗೆ ಎಷ್ಟು ಮೊತ್ತದ ಸಹಾಯಧನವನ್ನು ವಿತರಣೆ ಮಾಡಲಾಗಿದೆ? | ಕಳೆದ ಮೂರು ವರ್ಷಗಳಲ್ಲಿ ಮಂಡಳಿಯ ಫಲಾನುಭವಿಗಳಿಗೆ ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಯೋಜನೆಗಳಡಿ ಮತ್ತು ಕೋವಿಡ್-19ರ 1ನೇ ಅಲೆ ಮತ್ತು 2ನೇ ಅಲೆಯ ಸಂಧರ್ಭದಲ್ಲಿ ಪರಿಹಾರ ವಿತರಣೆಗಾಗಿ ಮಂಡಳಿಯ ಸುಂಕ ನಿಧಿಯಿಂದ ಭರಿಸಿರುವ ವಿವರ ಈ ಕೆಳಕಂಡಂತಿದೆ: |

| ಕ್ರ ಸಂ | ವಿವರ | ಫಲಾನುಭವಿಗಳ ಸಂಖ್ಯೆ | ಬಿಡುಗಡೆ ಮಾಡಿದ ಮೊತ್ತ (ರೂ. ಕೋಟಿ ಗಳಲ್ಲಿ) |
|---|---|---|---|
| 1 | ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳ ವಿತರಣೆ | 5,00,382 | 579.70 |
| 2 | ಕೋವಿಡ್-19 1ನೇ ಅಲೆಯಲ್ಲಿ ಒಂದು ಬಾರಿಯ ಸಹಾಯಧನ | 16,48,431 | 824.21 |
| 3 | ಕೋವಿಡ್-19 ನೇ 2ನೇ ಅಲೆಯಲ್ಲಿ ಒಂದು ಬಾರಿಯ ಸಹಾಯಧನ | 19.22,083 | 576.62 |
| 4 | ಕೋವಿಡ್-19 1ನೇ ಅಲೆಯಲ್ಲಿ ಸಿದ್ದಪಡಿಸಿದ ಆಹಾರ ಪೊಟ್ಟಣ | 87.89 ಲಕ್ಷ | 26.71 |
| 5 | ಕೋವಿಡ್-19 1ನೇ ಅಲೆಯಲ್ಲಿ ಆಹಾರ ಸಮಾಗ್ರಿಗಳ ಕಿಟ್ ವಿತರಣೆಗಾಗಿ | 7.15 ಲಕ್ಷ | 53.94 |
| 6 | ಕೋವಿಡ್-19 2ನೇ ಆಲೆಯಲ್ಲಿ ಆಹಾರ ಸಮಾಗ್ರಿಗಳ ಕಿಟ್ ವಿತರಣೆಗಾಗಿ | 23.42 ಲಕ್ಷ | 203.51 |
| 7 | ರಕ್ಷಣ ಮತ್ತು ನೈರ್ಮಲೀಕರಣ ಕಿಟ್ ವಿತರಣೆ | 21.13 | 149.67 |

**ಕಾಇ 70 ಎಲ್‌ಇಟಿ 2022**

(ಅರಬೈಲ್ ಶಿವರಾಂ ಹೆಬ್ಬಾರ್)
ಕಾರ್ಮಿಕ ಸಚಿವರು

ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಮುನಿರಾಜು ಗೌಡ ಎಂ. ಪಿ.
(ವಿಧಾನ ಸಭೆಯಿಂದ ಚುನಾಯಿತರಾದವರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 286ಕ್ಕೆ

## ಅನುಬಂಧ

### ಮಂಡಳಿಯ ವತಿಯಿಂದ ನೋಂದಾಯಿತ ಫಲಾನುಭವಿಗಳಿಗೆ ಸಿಗುವ ಸೌಲಭ್ಯಗಳು

1. **ಪಿಂಚಣಿ ಸೌಲಭ್ಯ:** ಮೂರು ವರ್ಷ ಸದಸ್ಯತ್ವದೊಂದಿಗೆ 60 ವರ್ಷ ಪೂರೈಸಿದ ಫಲಾನುಭವಿಗೆಮಾಸಿಕ **ರೂ.2,000/-**
2. **ಕುಟುಂಬ ಪಿಂಚಣಿ ಸೌಲಭ್ಯ:** ಮೃತ ಪಿಂಚಣಿದಾರರ ಪತಿ / ಪತ್ನಿ ಮಾಸಿಕ **ರೂ.1000/-**
3. **ದುರ್ಬಲತೆ ಪಿಂಚಣಿ:** ನೋಂದಾಯಿತ ಫಲಾನುಭವಿಯು ಖಾಯಿಲೆಗಳಿಂದ ಅಥವಾಕಟ್ಟಡ ಕಾಮಗಾರಿಗಳ ಅಪಘಾತದಿಂದ ಶಾಶ್ವತ/ಭಾಗಶಃಅಂಗವಿಕಲತೆ ಹೊಂದಿದ್ದರೆ ಮಾಸಿಕ **ರೂ.2,000/-** ಪಿಂಚಣಿ ಹಾಗೂ ಶೇಕಡವಾರು ದುರ್ಬಲತೆಯನ್ನಾಧರಿಸಿ **ರೂ.2,00,000/-** ದವರೆಗೆಅನುಗ್ರಹ ರಾಶಿ ಸಹಾಯಧನ.
4. **ಕನ್ನಡಕ, ಶ್ರವಣಯಂತ್ರ, ಕೃತಕ ಕೈಕಾಲು ಮತ್ತು ಗಾಲಿ ಕುರ್ಚಿ** ಮರುಪಾವತಿ ಸೌಲಭ್ಯ(ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ)
5. **ಟ್ರೈನಿಂಗ್-ಕಮ್-ಟೂಲ್‌ಕಿಟ್‌ಸೌಲಭ್ಯ (ಶ್ರಮ ಸಾಮರ್ಥ್ಯ): ರೂ.30,000/- ವರೆಗೆ**
6. **ಶ್ರಮ ಸಂಸಾರ ಸಾಮರ್ಥ್ಯತರಬೇತಿ ಸೌಲಭ್ಯ:** ನೋಂದಾಯಿತ ಫಲಾನುಭವಿಯಅವಲಂಭಿತರಿಗೆ(ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ)
7. **ವಸತಿ ಸೌಲಭ್ಯ (ಕಾರ್ಮಿಕ ಗೃಹ ಭಾಗ್ಯ): ರೂ.2,00,000/-** ದವರೆಗೆ ಮುಂಗಡ ಸೌಲಭ್ಯ
8. **ಹೆರಿಗೆ ಸೌಲಭ್ಯ (ತಾಯಿ ಲಕ್ಷ್ಮೀ ಬಾಂಡ್):** ಮಹಿಳಾ ಫಲಾನುಭವಿಯ ಮೊದಲ ಎರಡು ಮಕ್ಕಳಿಗೆ ಹೆಣ್ಣು ಮಗುವಿನ ಜನನಕ್ಕೆರೂ. **30,000/-** ಮತ್ತುಗಂಡು ಮಗುವಿನ ಜನನಕ್ಕೆರೂ.**20,000/-**
9. **ಶಿಶು ಪಾಲನಾ ಸೌಲಭ್ಯ:**
10. **ಅಂತ್ಯಕ್ರಿಯೆ ವೆಚ್ಚ : ರೂ.4,000/-** ಹಾಗೂ ಅನುಗ್ರಹ ರಾಶಿ **ರೂ.50,000/-**ಸಹಾಯಧನ
11. **ಶೈಕ್ಷಣಿಕ ಸಹಾಯಧನ (ಕಲಿಕೆ ಭಾಗ್ಯ): ಫಲಾನುಭವಿಯಇಬ್ಬರು ಮಕ್ಕಳ ವಿದ್ಯಾಭ್ಯಾಸಕ್ಕಾಗಿ:**

| ಕ್ರ.ಸಂ | ತರಗತಿ (ಉತ್ತೀರ್ಣಕ್ಕೆ) | |
|---|---|---|
| 1. | ಕೆಜಿ/ ಪೂರ್ವ ಶಾಲೆ /ನರ್ಸರಿ (ವರ್ಷ 3 ರಿಂದ 5) | 5,000 |
| 2. | 1 ರಿಂದ 4ನೇ ತರಗತಿ | 5,000 |
| 3 | 5 ರಿಂದ 8ನೇ ತರಗತಿ | 8,000 |
| 4 | 9 ಹಾಗೂ 10ನೇ ತರಗತಿ | 12,000 |
| | ಪದವಿ ಪೂರ್ವ | |
| 5 | ಪ್ರಥಮ ಪಿಯುಸಿ ಮತ್ತು ದ್ವಿತೀಯ ಪಿ.ಯು.ಸಿ | 15,000 |
| 6 | ಪಾಲಿಟೆಕ್ನಿಕ್ / ಡಿಪ್ಲಮಾ/ ಐಟಿಐ | 20,000 |
| 7 | ಬಿಎಸ್‌ಸಿ ನರ್ಸಿಂಗ್/ ಜಿಎನ್‌ಎಮ್/ ಎಎನ್‌ಎಮ್/ ಪಾರಮೆಡಿಕಲ್ ಕೋರ್ಸ್ | 40,000 |
| 8 | ಡಿ.ಎಡ್ | 25,000 |
| | ಬಿ.ಎಡ್ | 35,000 |
| 9 | ಪದವಿ ಪ್ರತಿ ವರ್ಷಕ್ಕೆ (ಯಾವುದೇ ಪದವಿ) | 25,000 |

| | | |
|---|---|---|
| 10 | ಎಲ್‌ಎಲ್‌ಬಿ / ಎಲ್‌ಎಲ್‌ಎಮ್ | 30,000 |
| 11 | ಸ್ನಾತಕೋತ್ತರ ಪದವಿ ಸೇರ್ಪಡೆಗೆ | 35,000 ಗರಿಷ್ಠ<br>2 ವರ್ಷಅವಧಿಗೆ ಒಳಪಟ್ಟು |
| **ತಾಂತ್ರೀಕ/ ವೈದ್ಯಕೀಯ ಎನ್‌ಇಇಟಿ ಅಥವಾ ಕೆಸಿಇಟಿ** | | |
| 12 | ಬಿಇ / ಬಿ.ಟೆಕ್ ಅಥವಾ ಸಂಬಂಧಪಟ್ಟ ಯೂಜಿಕೋರ್ಸ್ | ಸದರಿ<br>ಕೋರ್ಸ್‌ನ ಗರಿಷ್ಠ<br>2 ವರ್ಷ ಅವಧಿಗೆ ಒಳಪಟ್ಟು<br>ವಾರ್ಷಿಕ ರೂ.50,000 |
| 13 | ಎಮ್.ಟೆಕ್/ ಎಮ್ ಇ ( ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕೋತ್ತರ ಕೋರ್ಸ್) | ಸದರಿ<br>ಕೋರ್ಸ್‌ನ ಗರಿಷ್ಠ<br>ಅವಧಿಗೆ ಒಳಪಟ್ಟು<br>ವಾರ್ಷಿಕರೂ. 60,000 |
| 14 | ವೈದ್ಯಕೀಯ (ಎಮ್‌ಬಿಬಿಎಸ್ /ಬಿಎಎಮ್‌ಎಸ್ / ಬಿಡಿಎಸ್ /ಬಿಹೆಚ್‌ಎಮ್‌ಎಸ್ ಕೋರ್ಸ್‌ಗೆ ಅಥವಾ ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕೋತ್ತರ ಕೋರ್ಸ್ | ರೂ.60,000<br>(ಸದರಿ<br>ಕೋರ್ಸ್‌ನ ಗರಿಷ್ಠ<br>ಅವಧಿಗೆ ಒಳಪಟ್ಟು ) |
| | ಎಮ್‌ಡಿ | ರೂ. 75,000 (ಸದರಿ<br>ಕೋರ್ಸ್‌ನ ಗರಿಷ್ಠ<br>ಅವಧಿಗೆ ಒಳಪಟ್ಟು) |
| 15 | ಪಿಹೆಚ್‌ಡಿ / ಎಮ್. ಫಿಲ್ (ಯಾವುದೇ ವಿಷಯ) | ಪಿಹೆಚ್‌ಡಿಗೆ ಗರಿಷ್ಠ<br>ಮೂರು ವರ್ಷಗಳಿಗೆ ಹಾಗೂ<br>ಎಮ್‌ಫಿಲ್‌ಗೆ 1 ವರ್ಷಕ್ಕೆ<br>ಪ್ರತಿ ವರ್ಷ<br>ರೂ. 25,000 (ಯೂಜಿಸಿಯ<br>ಜೂನಿಯರ್ ರಿಸರ್ಚ್ ಫೆಲೋಶಿಫ್‌ಗೆ<br>ಆಯ್ಕೆಯಾಗಿರುವ ಅಭ್ಯರ್ಥಿಗಳು ಹಾಗೂ<br>ಮತ್ತು<br>ರಾಜ್ಯ ಸರ್ಕಾರದಲ್ಲಿ ಕೆಲಸ<br>ನಿರ್ವಹಿಸುತ್ತಿರುವ ಅಭ್ಯರ್ಥಿಗಳು ಹಾಗೂ<br>ಯೂಜಿಸಿ ನಿಯಮಗಳನ್ವಯ ವೇತನ<br>ಅನುದಾನಕ್ಕೆ ಒಳಪಡುವ ಹುದ್ದೆಗಳಲ್ಲಿ<br>ಅನುದಾನಿತ<br>ಕಾಲೇಜುಗಳಲ್ಲಿ ಕೆಲಸ<br>ನಿರ್ವಹಿಸುತ್ತಿರುವ ಅಭ್ಯರ್ಥಿಗಳು<br>ಈ ಸೌಲಭ್ಯವನ್ನು ಪಡೆಯಲು<br>ಅರ್ಹರಿರುವುದಿಲ್ಲ. |
| 16 | ಐಐಟಿ/ಐಐಐಟಿ/ ಐಐಎಮ್/ ಎನ್‌ಐಟಿ/ ಐಐಎಸ್‌ಇಆರ್/ ಎಐಐಎಮ್‌ಎಸ್ /ಎನ್‌ಎಲ್‌ಯೂ ಮತ್ತು ಭಾರತ ಸರ್ಕಾರದ ಮಾನ್ಯತೆ ಪಡೆದ ಕೋರ್ಸ್‌ಗಳು | ಪಾವತಿಸಿದ ಬೋಧನಾ ಶುಲ್ಕ |

12. **ವೈದ್ಯಕೀಯ ಸಹಾಯಧನ (ಕಾರ್ಮಿಕ ಆರೋಗ್ಯ ಭಾಗ್ಯ):** ನೋಂದಾಯಿತ ಫಲಾನುಭವಿ ಹಾಗೂ ಅವರ ಅವಲಂಭಿತರಿಗೆ **ರೂ.300/-** ರಿಂದ**ರೂ.10,000/-**ವರೆಗೆ
13. **ಅಪಘಾತ ಪರಿಹಾರ:** ಮರಣ ಹೊಂದಿದ್ದಲ್ಲಿ**ರೂ.5,00,000/-**, ಸಂಪೂರ್ಣ ಶಾಶ್ವತ ದುರ್ಬಲತೆಯಾದಲ್ಲಿ **ರೂ.2,00,000/-** ಮತ್ತು ಭಾಗಶಃ ಶಾಶ್ವತ ದುರ್ಬಲತೆಯಾದಲ್ಲಿ **ರೂ.1,00,000/-**
14. **ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ (ಕಾರ್ಮಿಕ ಚಿಕಿತ್ಸಾ ಭಾಗ್ಯ):** ಹೃದ್ರೋಗ, ಕಿಡ್ನಿಜೋಡಣೆ, ಕ್ಯಾನ್ಸರ್ ಶಸ್ತ್ರಚಿಕಿತ್ಸೆ, ಕಣ್ಣಿನ ಶಸ್ತ್ರಚಿಕಿತ್ಸೆ, ಪಾರ್ಶ್ವವಾಯು, ಮೂಳೆ ಶಸ್ತ್ರಚಿಕಿತ್ಸೆ, ಗರ್ಭಕೋಶ ಶಸ್ತ್ರಚಿಕಿತ್ಸೆ, ಅಸ್ತಮ ಚಿಕಿತ್ಸೆ, ಗರ್ಭಪಾತ ಪ್ರಕರಣಗಳು, ಪಿತ್ತಕೋಶದತೊಂದರೆಗೆ ಸಂಬಂಧಿತಚಿಕಿತ್ಸೆ, ಮೂತ್ರ ಪಿಂಡದಲ್ಲಿನ ಕಲ್ಲುತೆಗೆಯುವ ಚಿಕಿತ್ಸೆ, ಮೆದುಳಿನ ರಕ್ತಸ್ರಾವದಚಿಕಿತ್ಸೆ, ಅಲ್ಸರ್‌ಚಿಕಿತ್ಸೆ, ಡಯಾಲಿಸಿಸ್ ಚಿಕಿತ್ಸೆ, ಕಿಡ್ನಿ ಶಸ್ತ್ರಚಿಕಿತ್ಸೆ, ಇ.ಎನ್.ಟಿ. ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ನರರೋಗ ಶಸ್ತ್ರಚಿಕಿತ್ಸೆ, ವ್ಯಾಸ್ಕ್ಯೂಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಕರುಳಿನ ಶಸ್ತ್ರಚಿಕಿತ್ಸೆ, ಸ್ತನ ಸಂಬಂಧಿತಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಹರ್ನಿಯ ಶಸ್ತ್ರಚಿಕಿತ್ಸೆ, ಅಪೆಂಡಿಕ್ಸ್ ಶಸ್ತ್ರಚಿಕಿತ್ಸೆ, ಮೂಳೆ ಮುರಿತ/ಡಿಸ್‌ಲೊಕೇಶನ್‌ಚಿಕಿತ್ಸೆ, ಇತರೆ ಔದ್ಯೋಗಿಕ ಖಾಯಿಲೆಗಳ ಚಿಕಿತ್ಸೆಗಳಿಗೆ **ರೂ.2,00,000/-**ವರೆಗೆ
15. **ಮದುವೆ ಸಹಾಯಧನ (ಗೃಹ ಲಕ್ಷ್ಮೀ ಬಾಂಡ್):** ಫಲಾನುಭವಿ ಅಥವಾ ಅವರ ಇಬ್ಬರು ಮಕ್ಕಳ ಮದುವೆಗೆ ತಲಾ **ರೂ.50,000/-**
16. **ಫಲಾನುಭವಿಯ ಮಕ್ಕಳು ಯುಪಿಎಸ್‌ಸಿ, ಕೆಪಿಎಸ್‌ಸಿ ಹುದ್ದೆಗಳಿಗಾಗಿ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಲು ಪ್ರತಿಷ್ಠಿತ ಸಂಸ್ಥೆಗಳಿಂದ ತರಬೇತಿ ಮತ್ತು ಅವರ ಮಕ್ಕಳು ಹೊರದೇಶಗಳಲ್ಲಿ ಉನ್ನತ ವ್ಯಾಸಂಗ ಮಾಡಲು ತಗಲುವ ವೆಚ್ಚವನ್ನು ಮಂಡಳಿವತಿಯಿಂದ ಭರಿಸಲಾಗುವುದು.**
17. **ಬಿಎಂಟಿಸಿ ಬಸ್ ಪಾಸ್ ಸೌಲಭ್ಯ:** ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕೆಲಸ ಮಾಡುತ್ತಿರುವಂತಹ / ವಾಸಸ್ಥಳದಿಂದ ಬೆಂಗಳೂರಿಗೆ ಪ್ರಯಾಣಿಸುವ ನೋಂದಾಯಿತಕಟ್ಟಡಕಾರ್ಮಿಕರಿಗೆ
18. **ಕೆಎಸ್‌ಆರ್‌ಟಿಸಿ ಬಸ್ ಪಾಸ್‌ನ ಸೌಲಭ್ಯ:** ರಾಜ್ಯದಾದ್ಯಂತ ವಿದ್ಯಾಭ್ಯಾಸದಲ್ಲಿ ತೊಡಗಿರುವ ನೋಂದಾಯಿತ ಕಾರ್ಮಿಕರ ಇಬ್ಬರು ಮಕ್ಕಳಿಗೆ (ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ)
19. **ತಾಯಿ ಮಗು ಸಹಾಯ ಹಸ್ತ:** ಮಹಿಳಾ ಫಲಾನುಭವಿಯು ಮಗುವಿಗೆ ಜನ್ಮ ನೀಡಿದ ಸಂದರ್ಭದಲ್ಲಿ ಆಕೆಯ ಮಗುವಿನ ಶಾಲಾ ಪೂರ್ವ ಶಿಕ್ಷಣ ಮತ್ತು ಪೌಷ್ಠಿಕತೆಗಾಗಿ ಮಗುವಿಗೆ ಮೂರು ವರ್ಷಗಳು ತುಂಬುವವರೆಗೆ ವಾರ್ಷಿಕ**ರೂ.6,000/-** ಗಳ ಸಹಾಯಧನ.